ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

GST ಪರಿಹಾರದ ಬಗ್ಗೆ

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) -

546 (551) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾಗಿರುವ GST ಪರಿಹಾರದ ಮೊತ್ತವೆಷ್ಟು;

(ಆ) ಸರಕು ಮತ್ತು ಸೇವಾ ತೆರಿಗೆ (GST) ನಷ್ಟ ಪರಿಹಾರದ ಅಲಭ್ಯತೆಯಿಂದಾಗಿ ಉಂಟಾಗಿರುವ ಆದಾಯ ಕೊರತೆ ಎಷ್ಟು;

(ಇ) GST ಸೆಸ್ ಹಾಗೂ ವಿಶೇಷ ರೂಪದ ಸಾಲ ಪಡೆಯುವ ಬಗ್ಗೆ ಸರ್ಕಾರ ಯಾವ ವಿಧಾನವನ್ನು ಆಯ್ಕೆ ಮಾಡಿಕೊಂಡಿದೆ; ಇದರಲ್ಲಿ ಎಷ್ಟು ಸಾಲ ಪಡೆಯುವ ಉದ್ದೇಶ ಹೊಂದಿದೆ; ಇದಕ್ಕೆ ಪಾವತಿಸಬೇಕಾದ ಬಡ್ಡಿದರ ಎಷ್ಟು ಇದನ್ನು ಸರ್ಕಾರ ಯಾವ ಉದ್ದೇಶಕ್ಕೆ ಬಳಸಿಕೊಳ್ಳಲು ತೀರ್ಮಾನಿಸಲಾಗಿದೆ; ಹಾಗೂ ಇದರಿಂದಾಗುವ ಅನುಕೂಲಗಳೇನು;

(ಈ) ಸಾಲ ಪಡೆದಲ್ಲಿ, ಈ ಸಾಲದ ಮೇಲಿನ ಬಡ್ಡಿಯನ್ನು ಸರ್ಕಾರ ಯಾವ ಸಂಪನ್ಮೂಲದಿಂದ ಪಾವತಿಸಬೇಕಾಗುತ್ತದೆ; (ವಿವರ ನೀಡುವುದು)

(ಉ) ರಾಜ್ಯ ಸರ್ಕಾರದ ಋಣಭಾರ ಎಷ್ಟು ಲಕ್ಷ ಕೋಟಿಗೆ ಏರಿಕೆಯಾಗಿದೆ; ಹಾಗೂ ಈಗ ಹಾಲಿ ಇರುವ ಋಣಭಾರ ಎಷ್ಟು?